**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:–** ದ್ವಿತೀಯ ಪಿಯುಸಿ ಅಂಕಪಟ್ಟಿ ಪರಿಶೀಲನೆ ಹಾಗೂ ನೈಜತೆಯ ವರದಿಯನ್ನು ನೀಡಲು ಶುಲ್ಕವನ್ನು ನಿಗದಿಪಡಿಸುವ ಬಗ್ಗೆ.

**ಓದಲಾಗಿದೆ:–** ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆರವರ ಪತ್ರ ಸಂಖ್ಯೆ:ಪಪೂಶಿ/ಡಿಎಂಸಿ/ನೈಜತೆ/ಶುಲ್ಕ:ಪಾ/2019–20 ದಿನಾಂಕ:17–12–2019.

**ಪ್ರಸ್ತಾವನೆ:**

ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ದ್ವಿತೀಯ ಪಿಯುಸಿ ಅಂಕಪಟ್ಟಿ ಪರಿಶೀಲನೆ ಹಾಗೂ ನೈಜತೆಯ ವರದಿಯನ್ನು ನೀಡಲು ಇದುವರೆಗೆ ಯಾವುದೇ ಶುಲ್ಕವನ್ನು ಪಡೆಯದೆ ಇತರೆ ಇಲಾಖೆಗಳಿಗೆ ಹಾಗೂ ಅಭ್ಯರ್ಥಿಗಳಿಗೆ ಉಚಿತವಾಗಿ ವರದಿಯನ್ನು ನೀಡಲಾಗುತ್ತಿದೆ. ಸರ್ಕಾರದ ಆದೇಶ ಸಂಖ್ಯೆ:ಇಡಿ 235 ಎಸ್‌ಎಲ್‌ಬಿ 2018 ದಿನಾಂಕ:21–01–2019ರಲ್ಲಿ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಲ್ಲಿ ಎಸ್.ಎಸ್.ಎಲ್.ಸಿ. ಅಂಕಪಟ್ಟಿಗಳ ನೈಜತೆಯ ಪರಿಶೀಲನೆಗೆ ಸಾಮಾನ್ಯ ರೂ.175/–. ಹಾಗೂ ತುರ್ತು ಸಂದರ್ಭದಲ್ಲಿ ರೂ.350/–ಗಳಂತೆ ಶುಲ್ಕವನ್ನು ನಿಗದಿ ಮಾಡಲಾಗಿದೆ. ಎವಿಧ ವಿಶ್ವವಿದ್ಯಾನಿಲಯಗಳಲ್ಲಿಯೂ ಶುಲ್ಕ ನಿಗಧಿಯಾಗಿರುತ್ತದೆ. ಸಿ.ಬಿ.ಎಸ್.ಇ. ಯಲ್ಲಿ ರೂ.500/–ಗಳ ಶುಲ್ಕವನ್ನು ನಿಗಧಿ ಮಾಡಲಾಗಿದೆ. ಆದ್ದರಿಂದ 2020ನೇ ಸಾಲಿನಿಂದ ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ದ್ವಿತೀಯ ಪಿಯುಸಿ ಅಂಕಪಟ್ಟಿ ನೈಜತೆಯ ಪರಿಶೀಲನೆಯನ್ನು ಆನ್‌ಲೈನ್ ಮುಖಾಂತರ ನಿರ್ವಹಿಸಲು ತಂತ್ರಾಂಶವನ್ನು ರೂಪಿಸಿ, ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ದ್ವಿತೀಯ ಪಿಯುಸಿ ಅಂಕಪಟ್ಟಿ ಪರಿಶೀಲನೆ ಹಾಗೂ ನೈಜತೆಯ ಪರಿಶೀಲನೆಗೆ ರೂ.200/–ಗಳ ಶುಲ್ಕವನ್ನು(ಕರ್ನಾಟಕ ಸರ್ಕಾರ, ಭಾರತ ಸರ್ಕಾರ ಮತ್ತು ಸಾರ್ವಜನಿಕ ವಲಯದ ಸಂಸ್ಥೆಗಳ ಇಲಾಖೆಗಳನ್ನು ಹೊರತುಪಡಿಸಿ) ನಿಗಧಿಪಡಿಸಿ ಆದೇಶ ಹೊರಡಿಸಲು ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆರವರು ಮೇಲೆ ಓದಲಾದ ಪತ್ರದಲ್ಲಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆರವರ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಪಿ 3 ಡಿಜಿಡಿ 2020, ಬೆಂಗಳೂರು,**
**ದಿನಾಂಕ:19–03–2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ದ್ವಿತೀಯ ಪಿಯುಸಿ ಅಂಕಪಟ್ಟಿ ಪರಿಶೀಲನೆ ಹಾಗೂ ನೈಜತೆಯ ವರದಿಯನ್ನು ನೀಡಲು ಈ ಕೆಳಕಂಡಂತೆ ಶುಲ್ಕವನ್ನು ನಿಗದಿಪಡಿಸಿ ಆದೇಶಿಸಿದೆ.

| ಕ್ರಮ ಸಂಖ್ಯೆ | ವಿಷಯ | ನಿಗಧಿಪಡಿಸಿರುವ ಶುಲ್ಕ |
|---|---|---|
| 1. | ದ್ವಿತೀಯ ಪಿಯುಸಿ ಅಂಕಪಟ್ಟಿ ಪರಿಶೀಲನೆ ಹಾಗೂ ನೈಜತೆಯ ವರದಿ (ಕರ್ನಾಟಕ ಸರ್ಕಾರ, ಭಾರತ ಸರ್ಕಾರ ಮತ್ತು ಸಾರ್ವಜನಿಕ ವಲಯದ ಸಂಸ್ಥೆಗಳ ಇಲಾಖೆಗಳನ್ನು ಹೊರತುಪಡಿಸಿ) | ರೂ.200/– |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶೇಖರ), 19/03/2020
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ(ಪದವಿ ಪೂರ್ವ ಶಿಕ್ಷಣ).

DMC
8/5/2020